**ಸಾಕ್ಷಿಗೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯವಿಚಾರಣೆಃ ವಾದಿ ಪರವಾಗಿ ಶ್ರೀ SGJ ವಕೀಲರಿಂದಃ-**

ನಾನು ನನ್ನ ಮುಖ್ಯ ವಿಚಾರಣೆಯ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು, ಅದನ್ನು ನಾನೇ ನಮ್ಮ ವಕೀಲರಿಗೆ ಹೇಳಿ ಬರೆಸಿರುತ್ತೇನೆ.

1. ದಿನಾಂಕ 16-09-2021 ರ ನೊಂದಾಯಿತ ಕ್ರಯಾ ಪತ್ರವನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ-1 ಎಂದು ಗುರುತಿಸಲಾಯಿತು.
2. ಎರಡು ಪಂಚನಾಮ ಮತ್ತು ಎರಡು ಹದ್ದುಬಸ್ತು ನಕಾಶೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-2 ರಿಂದ ನಿಪಿ-5 ಎಂದು ಗುರುತಿಸಲಾಯಿತು.
3. ಸ.ನಂ. 47/5 ಮತ್ತು ಸ.ನಂ. 47/6 ನೇದ್ದರ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-6 ಮತ್ತು 7 ಎಂದು ಗುರುತಿಸಲಾಯಿತು.

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರ ಹಾಗೂ ನಾನು ಹಾಜರುಪಡಿಸಿದ ದಾಖಲೆಗಳನ್ನು ಪರಿಗಣಿಸಿ ಸದರಿ ದಾವೆಯನ್ನು ಡಿಕ್ರಿ ಮಾಡಬೇಕಾಗಿ ಕೋರಿಕೊಳ್ಳುತ್ತೇನೆ..

**ಪಾಟೀ ಸವಾಲಿಗೆ ಪ್ರತಿವಾದಿ ಪರ ವಕೀಲರು ಸಮಯವಕಾಶ ಕೋರಿದ್ದರಿಂದ ಸಮಯ ನೀಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು,**
**ಚಿಂಚೋಳಿ**